

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ಸೋಮವಾರ ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ದಿಢೀರ್ ಭೇಟಿ ನೀಡಿ ವಿಶ್ವವಿದ್ಯಾಲಯದ ಕಾರ್ಯವೈಖರಿ ಪರಿಶೀಲಿಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಕುಲಪತಿ ಡಾ.ಎಸ್.ವಿ.ಸುರೇಶ್, ಕುಲಸಚಿವ ಬಸವೇಗೌಡ ಮತ್ತಿತರರು ಉಪಸ್ಥಿತರಿದ್ದರು.

Udayavani Pg.02

'ರೈತರಿಗೆ ಸಕಾಲಕ್ಕೆ ಕೃಷಿ ತಂತ್ರಜ್ಞಾನ ತಲುಪಿಸಿ'

• ಕನ್ನಡಪ್ರಭ ವಾರ್ತೆ ಬೆಂಗಳೂರು

ಕೃಷಿ ವಿಶ್ವವಿದ್ಯಾಲಯಗಳು ಸಕಾಲಕ್ಕೆ ಕೃಷಿ ತಂತ್ರಜ್ಞಾನಗಳನ್ನು ರೈತರಿಗೆ ತಲುಪಿಸಬೇಕು, ಅದೇ ರೀತಿ ಕೃಷಿ ವಿದ್ಯಾರ್ಥಿಗಳು ಮೂರು ತಿಂಗಳು ಗ್ರಾಮೀಣ ಪ್ರದೇಶದಲ್ಲಿ ವಾಸವಿದ್ದು ರೈತರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹಲೋಥ್ ಸಲಹೆ ನೀಡಿದರು.

ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಜಿಕೆವಿಕೆ ಕ್ಯಾಂಪಸ್‌ಗೆ ಸೋಮವಾರ ಭೇಟಿ ನೀಡಿ ವಿವಿಯ ವಿವಿಧ ಕಾರ್ಯ ಚಟುವಟಿಕೆಗಳ ಬಗ್ಗೆ ಮಾಹಿತಿ ಪಡೆದ ನಂತರ ಅವರು ಮಾತನಾಡಿದರು.

ರೈತರ ಸಮಸ್ಯೆಗಳನ್ನು ನಿವಾರಿಸಲು ಕೃಷಿ ವಿವಿಗಳು ಸಂಶೋಧನೆ ಕೈಗೊಳ್ಳಬೇಕು. ಸಕಾಲದಲ್ಲಿ ಕೃಷಿ ತಂತ್ರಜ್ಞಾನಗಳನ್ನೂ ರೈತರಿಗೆ ಪರಿಣಾಮಕಾರಿಯಾಗಿ ತಲುಪಿಸಬೇಕು. ಎಂಬಿಬಿಎಸ್ ಬಳಿಕ ಹೇಗೆ ವೈದ್ಯಕೀಯ ಪದವೀಧರರು ಗ್ರಾಮೀಣ ಪ್ರದೇಶಗಳಲ್ಲಿ ಸೇವೆ ಮಾಡುತ್ತಾರೋ ಅದೇ ರೀತಿ ಬಿಎಸ್ಸಿ ಕೃಷಿ ಅಂತಿಮ ವರ್ಷದ ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದಲ್ಲಿ ಮೂರು ತಿಂಗಳು ವಾಸವಿರಬೇಕು ಎಂದು ಅಭಿಪ್ರಾಯಪಟ್ಟರು.



ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಜಿಕೆವಿಕೆ ಕ್ಯಾಂಪಸ್‌ಗೆ ಸೋಮವಾರ ಭೇಟಿ ನೀಡಿದ ರಾಜ್ಯಪಾಲ ಥಾವರ್‌ಚಂದ್ ಗೆಹಲೋತ್ ಅವರು ಧಾನ್ಯಗಳ ರಾಶಿಯನ್ನು ವೀಕ್ಷಿಸಿದರು. ವಿವಿ ಕುಲಪತಿ ಡಾ.ಎಸ್.ವಿ.ಸುರೇಶ್ ಮತ್ತಿತರರು ಹಾಜರಿದ್ದರು.

ಕೃಷಿ ಕ್ಷೇತ್ರದ ಪರಿಣತಿ: ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದಲ್ಲಿ ಮೂರು ತಿಂಗಳು ವಾಸಿಸುವುದರಿಂದ ಕೃಷಿ ಕ್ಷೇತ್ರದ ಪರಿಣತಿ ಸಿಗಲಿದೆ. ರೈತರು ಹಾಲಿ ಬಳಸುತ್ತಿರುವ ಬೆಳೆ ಪದ್ಧತಿ, ಯಾವ ಹೊಸ ಪದ್ಧತಿ ಅಳವಡಿಸಿಕೊಳ್ಳಬೇಕು. ಮಣ್ಣು ಪರೀಕ್ಷೆಯ ಅಗತ್ಯತೆ, ರಾಸಾಯನಿಕ ಮತ್ತು ಸಾವಯವ ಗೊಬ್ಬರಗಳ ಬಳಕೆ, ನೈಸರ್ಗಿಕ ಕೃಷಿಗೆ ಆದ್ಯತೆ ಮತ್ತಿತರ ವಿಷಯಗಳ ಬಗ್ಗೆ ರೈತರಿಗೆ ಮನದಟ್ಟು ಮಾಡಿಕೊಡಬಹುದು ಎಂದು ವಿವರಿಸಿದರು.

ವಿವಿಯ ಗ್ರಂಥಾಲಯ, ಕೀಟಶಾಸ್ತ್ರ ವಿಭಾಗ, ರೇಷ್ಮೆ, ತೋಟಗಾರಿಕೆ, ಬೀಜೋತ್ಪಾದನಾ ವಿಭಾಗ, ಮಣ್ಣು ರಹಿತ ಕೃಷಿ ಮತ್ತು ಕೃಷಿ ತಂತ್ರಜ್ಞಾನ ಮಾಹಿತಿ ಕೇಂದ್ರಗಳಿಗೆ ರಾಜ್ಯಪಾಲರು ಭೇಟಿ ನೀಡಿ ಕಾರ್ಯಚಟುವಟಿಕೆಗಳ ಕುರಿತು ಮಾಹಿತಿ ಪಡೆದು, ಸೂಕ್ತ ಸಲಹೆ ನೀಡಿದರು. ವಿವಿ ಕುಲಪತಿ ಡಾ.ಎಸ್.ವಿ.ಸುರೇಶ್, ಅಧಿಕಾರಿಗಳು, ವಿಜ್ಞಾನಿಗಳು ಉಪಸ್ಥಿತರಿದ್ದರು.

Kannadaprabha Pg.04

ವಿಜಯವಾಣಿ, ದಿಗ್ವಿಜಯ ವತಿಯಿಂದ ಆಯೋಜನೆ | 3 ದಿನಗಳ ಉತ್ಸವಕ್ಕೆ ಸಿದ್ಧತೆ

ಮೈಸೂರಲ್ಲಿ 27ರಿಂದ ವಿಜಯವಾಣಿ ಕೃಷಿ ಮೇಳ

■ ವಿಜಯವಾಣಿ ಸುದ್ದಿಜಾಲ ಮೈಸೂರು

ಜನಪರ ಮತ್ತು ಜನೋಪಯೋಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಲ್ಲಿ ಸದಾ ಮುಂದಿರುವ ಕನ್ನಡದ ನಂ.1 ದಿನಪತ್ರಿಕೆ 'ವಿಜಯವಾಣಿ' ಹಾಗೂ 'ದಿಗ್ವಿಜಯ' ಸುದ್ದಿವಾಹಿನಿ ವತಿಯಿಂದ ಮೈಸೂರಿನಲ್ಲಿ ರಾಜ್ಯ ಮಟ್ಟದ 'ಕೃಷಿ ಮೇಳ' ಆಯೋಜಿಸಲಾಗಿದೆ. ಕೃಷಿ ಕ್ಷೇತ್ರದ ವೈವಿಧ್ಯಮಯ ಮುಖಗಳು ಇಲ್ಲಿ ಅನಾವರಣಗೊಳ್ಳಲಿದ್ದು, ಮೂರು ದಿನ ಕೃಷಿಲೋಕ ಮೈದಳೆಯಲಿದೆ. ಜ. 27, 28 ಮತ್ತು 29ರಂದು ಕೃಷಿ ಮೇಳ ನಡೆಯಲಿದ್ದು, ದೇಶದ ಪ್ರತಿಷ್ಠಿತ ವಿವಿಗಳಲ್ಲಿ ಒಂದಾಗಿರುವ ಮೈಸೂರು ವಿಶ್ವವಿದ್ಯಾಲಯ ಮೇಳಕ್ಕೆ ಸಹಯೋಗ ನೀಡಿದೆ. ಕೃಷಿ ಮೇಳದ ಮಳಿಗೆಗಳು ಹಾಗೂ ವೇದಿಕೆ ನಿರ್ಮಾಣ ಕಾರ್ಯಕ್ಕಾಗಿ ಮಹಾರಾಜ ಕಾಲೇಜು ಮೈದಾನದಲ್ಲಿ ಸೋಮವಾರ ಪೂಜಾ ವಿಧಿವಿಧಾನಗಳೊಂದಿಗೆ ಭೂಮಿಪೂಜೆ ನೆರವೇರಿಸಲಾಯಿತು.

ಕೃಷಿ ಮೇಳ 2023 ಸುಸ್ಥಿರ ಅಭಿವೃದ್ಧಿ ನಮ್ಮ ಗುರಿ

ತಜ್ಞರಿಂದ ವಿಚಾರ ಮಂಡನೆ: ಕೃಷಿಲೋಕದ ಆಗುಹೋಗುಗಳ ಕುರಿತು ತಜ್ಞರು, ರೈತ ಮುಖಂಡರು ವಿಚಾರ ಮಂಡಿಸಲಿದ್ದಾರೆ. ಕೃಷಿರಂಗದಲ್ಲಿ ಆಗಿರುವ ಬದಲಾವಣೆ, ಬೆಳವಣಿಗೆ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಪರಿಚಯಿಸುವ ವಸ್ತುಪ್ರದರ್ಶನವನ್ನೂ ಏರ್ಪಡಿಸಲಾಗಿದೆ. ● ಪುಟ 5B



ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ರಾಜ್ಯ ಮಟ್ಟದ ಕೃಷಿ ಮೇಳದ ಮಳಿಗೆಗಳು ಹಾಗೂ ವೇದಿಕೆ ನಿರ್ಮಾಣ ಕಾರ್ಯಕ್ಕೆ ಸೋಮವಾರ ಭೂಮಿಪೂಜೆ ನೆರವೇರಿಸಲಾಯಿತು.

ಮುಖ್ಯಮಂತ್ರಿ ಉದ್ಘಾಟನೆ

ಕೃಷಿ ಮೇಳವನ್ನು ಜ.27ರಂದು ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಉದ್ಘಾಟಿಸುವರು. ವಿಆರ್‌ಎಲ್ ಸಮೂಹ ಸಂಸ್ಥೆಗಳ ಚೇರ್ಮನ್ ಡಾ. ವಿಜಯ ಸಂಕೇಶ್ವರ, ವ್ಯವಸ್ಥಾಪಕ ನಿರ್ದೇಶಕ ಡಾ.ಆನಂದ ಸಂಕೇಶ್ವರ, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್ ಸೇರಿ ಹಲವು ಸಚಿವರು, ಶಾಸಕರು, ಸಂಸದರು, ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

Vijayavani Pg.2c

ಮೈಸೂರಲ್ಲಿ 27ರಿಂದ ಕೃಷಿಮೇಳ

ಪ್ರಗತಿಪರ ರೈತರು ಮತ್ತು ಕೃಷಿವಿಜ್ಞಾನಿಗಳಿಂದ ವಿಚಾರ ಮಂಡನೆ

ಮೊದಲನೇ ಪುಟದಿಂದ...

ಕೃಷಿ ಸಂಶೋಧನೆ ಮಾಡರಿಗಳು ನೋಡಲು ಸಿಗಲಿವೆ. ಕೃಷಿ ಮತ್ತು ರೈತರ ತವಕ-ತಲ್ಲಣಗಳ ಕುರಿತು ಮೂರು ದಿನಗಳಲ್ಲಿ ನಾಲ್ಕು ಗೋಷ್ಠಿಗಳನ್ನು ಆಯೋಜಿಸಲಾಗಿದೆ. 'ಕೃಷಿ ಅಂದು, ಇಂದು, ಮುಂದು', 'ಹಣ್ಣು, ತರಕಾರಿ, ಹೂವು ಬೆಳೆಯಲ್ಲಿ ಲಾಭ ಗಳಿಕೆ ಹೇಗೆ?', 'ರಾಷ್ಟ್ರೀಯ ಪೇಯ', 'ಮೌಲ್ಯವರ್ಧಿತ ಕೃಷಿ ಮತ್ತು ಮಾರುಕಟ್ಟೆ', 'ಆರ್ಥಿಕ ಸಬಲತೆಗೆ ಹೈನೋದ್ಯಮ' ವಿಷಯಗಳ ಕುರಿತು ತಜ್ಞರು, ರೈತ ಮುಖಂಡರು, ಪ್ರಗತಿಪರ ರೈತರು ಹಾಗೂ ಕೃಷಿ ವಿಜ್ಞಾನಿಗಳು ವಿಚಾರ ಮಂಡಿಸಲಿದ್ದಾರೆ.

ಜಾನಪದ ಕಲೆ ಮೆರುಗು: ರೈತರ ಬದುಕಿನೊಂದಿಗೆ ಅವಿನಾಭಾವ ಸಂಬಂಧ ಹೊಂದಿರುವ ಕೃಷಿ ಸಂಸ್ಕೃತಿ ಕೂಡ ಅನಾವರಣಗೊಳ್ಳಲಿದೆ. ಕೃಷಿಗೆ ಸಂಬಂಧಿಸಿದ ಜಾನಪದ ಕಲೆ, ಸಾಂಸ್ಕೃತಿಕ ಚಟುವಟಿಕೆಗಳು ಮೇಳಕ್ಕೆ ಮೆರುಗು ನೀಡಲಿವೆ. ದೇಸಿ ಕ್ರೀಡೆಗಳ ಆಯೋಜನೆ ವಿಶೇಷ ಆಕರ್ಷಣೆಯಾಗಿದೆ. ಪುರುಷರಿಗೆ, ಮಹಿಳೆಯರಿಗೆ ಹಾಗೂ ಮಕ್ಕಳಿಗೆ ಪ್ರತ್ಯೇಕ ಸ್ಪರ್ಧೆಗಳು ನಡೆಯಲಿವೆ.



ಜಾನುವಾರು ಪ್ರದರ್ಶನ: ಕೋಳಿ, ಬಾತುಕೋಳಿ, ಬಂಡೂರು ಕುರಿ ಸೇರಿ ವಿವಿಧ ತಳಿ ಪ್ರದರ್ಶನದ ಜತೆಗೆ, ಹೊಸ ತಳಿಯ ಜಾನುವಾರುಗಳ ಪ್ರದರ್ಶನವೂ ಇರಲಿದೆ.

ಮೆರವಣಿಗೆ: ಕೃಷಿ ಮೇಳದ ಅಂಗವಾಗಿ, ಜ. 27ರಂದು ಬೆಳಗ್ಗೆ 8.30ಕ್ಕೆ ನಗರದ ಸುಣ್ಣದಕೇರಿಯ ಮಹದೇಶ್ವರಸ್ವಾಮಿ ದೇವಸ್ಥಾನ ಮುಂಭಾಗದಿಂದ ಮೇಳ ನಡೆಯಲಿರುವ ಮಹಾರಾಜ ಕಾಲೇಜು ಮೈದಾನದವರೆಗೆ ಮೆರವಣಿಗೆ ನಡೆಯಲಿದೆ. ನಂದಿಕಂಬ, ವೀರಭದ್ರ ಕುಣಿತ, ಡೊಳ್ಳುಕುಣಿತ, ಪೂಜಾಕುಣಿತ, ಕಂಸಾಳೆ, ತಮಟೆ, ಕೀಲುಕುದುರೆ, ಕೋಲಾಟ ಮತ್ತು ನಗಾರಿ ಕಲಾ ತಂಡಗಳು ಭಾಗಿಯಾಗಿ ಮೆರವಣಿಗೆಗೆ ಮೆರುಗು ನೀಡಲಿವೆ.

ಕೃಷಿ ಕ್ಷೇತ್ರಕ್ಕೆ ಸಂಬಂಧಿಸಿದವರು, ವಿವಿಧ ಕ್ಷೇತ್ರದವರು ನೆರವು-ಸಹಕಾರ ನೀಡುವ ಮೂಲಕ ಮೇಳವನ್ನು ಯಶಸ್ವಿಗೊಳಿಸಲು ಹೆಗಲು ಕೊಟ್ಟಿದ್ದಾರೆ. ಸಾರ್ವಜನಿಕರು, ರೈತರು ಈ ಮೇಳದಲ್ಲಿ ಮುಕ್ತವಾಗಿ ಪಾಲ್ಗೊಂಡು ಕೃಷಿ, ಕಲೆ, ಗ್ರಾಮ ಸಂಸ್ಕೃತಿಯನ್ನು ಕಣ್ತುಂಬಿಕೊಳ್ಳಬಹುದಾಗಿದೆ.

ಗ್ರಾಮೀಣ ಕ್ರೀಡೆಗಳ ಆಕರ್ಷಣೆ

ಮಾನಸಿಕ, ದೈಹಿಕ ಶಕ್ತಿಗೆ ಪೂರಕವಾಗಿದ್ದ ದೇಸಿ ಕ್ರೀಡೆಗಳನ್ನು ನೆನಪಿಸುವ ಹಾಗೂ ಅದರ ಸೊಬಗನ್ನು ಯುವಜನತೆಗೆ ಪರಿಚಯಿಸುವ ಸಲುವಾಗಿ ಗ್ರಾಮೀಣ ಕ್ರೀಡೆಗಳ ಸ್ಪರ್ಧೆ ಏರ್ಪಡಿಸಲಾಗಿದೆ. ಜ. 28 ಮತ್ತು 29 ರಂದು ಸ್ಪರ್ಧೆಗಳು ನಡೆಯಲಿವೆ. ಜ. 28ರಂದು ಬೆಳಗ್ಗೆ 10 ಗಂಟೆಗೆ ದೇಸಿ ಕ್ರೀಡೆಗಳಿಗೆ ಚಾಲನೆ ಸಿಗಲಿದೆ. ಪುರುಷರಿಗೆ ಬಾಳೆಹಣ್ಣು ತಿನ್ನುವ ಸ್ಪರ್ಧೆ, ಒಂಟಿಕಾಲಿನ ಓಟ, ಗೊಬ್ಬರಮೂಟೆ ಹೊತ್ತು ಓಡುವ ಸ್ಪರ್ಧೆ ಆಯೋಜಿಸಲಾಗಿದೆ. ಮಹಿಳೆಯರಿಗೆ ಬಾಳೆಹಣ್ಣು ತಿನ್ನುವ ಸ್ಪರ್ಧೆ, ಲೆಮನ್ ಆ್ಯಂಡ್ ಸ್ಪೂನ್, ರಂಗೋಲಿ ಬಿಡಿಸುವುದು ಹಾಗೂ ಮಕ್ಕಳಿಗೆ ಸ್ಕಿಪ್ಪಿಂಗ್ ಸ್ಪರ್ಧೆ ನಡೆಯಲಿವೆ.

ನಗದು ಬಹುಮಾನ

ವಿಜೇತರಿಗೆ ಪ್ರಥಮ 3000 ರೂ., ದ್ವಿತೀಯ 2000 ರೂ. ಹಾಗೂ ತೃತೀಯ ಬಹುಮಾನ 1000 ರೂ. ನಗದು ಮತ್ತು ಟ್ರೋಫಿ ನೀಡಲಾಗುವುದು. ಸ್ಪರ್ಧೆಯಲ್ಲಿ ಪಾಲ್ಗೊಂಡ ಎಲ್ಲರಿಗೂ ಪ್ರಮಾಣಪತ್ರ ವಿತರಿಸಲಾಗುತ್ತದೆ. ರಾಜ್ಯದ ಯಾವುದೇ ಜಿಲ್ಲೆಯ ಜನರು ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಬಹುದು. ರೈತರು ಮತ್ತು ಸಾರ್ವಜನಿಕರು ತಮ್ಮ ಸಾಮರ್ಥ್ಯ ಪ್ರದರ್ಶನ ಮಾಡುವುದರ ಜತೆಗೆ ಪ್ರಶಸ್ತಿ ಗೆಲ್ಲ ಬಹುದು. ಆಸಕ್ತರು ಜ. 27ರ ಒಳಗೆ ಮೊ. 8310928134/ 9738886003ಗೆ ಕರೆ ಮಾಡಿ ಹೆಸರು ನೋಂದಾಯಿಸಬಹುದು. ಪ್ರವೇಶ ಶುಲ್ಕವಿರುವುದಿಲ್ಲ.

Vijayavani Pg.5c

ಡಬ್ಬಿ ಮೆಣಸಿನಕಾಯಿಗೆ ದಾಖಲೆ ದರ

ಬ್ಯಾಡಗಿ: ಇಲ್ಲಿನ ಮೆಣಸಿನಕಾಯಿ ಮಾರುಕಟ್ಟೆಗೆ ಸೋಮವಾರ 1,46,245 ಚೀಲ ಆವಕವಾಗುವ ಮೂಲಕ ಸತತ ಎರಡನೇ ಬಾರಿಗೆ ಪ್ರಸಕ್ತ ಸಾಲಿನಲ್ಲಿ ಲಕ್ಷ ಚೀಲ ದಾಟಿದ ದಾಖಲೆ ನಿರ್ಮಾಣವಾಗಿದೆ. ಡಬ್ಬಿ ಕಾಯಿಗೆ ಬಾರಿ ಬೇಡಿಕೆ ಬಂದಿದ್ದು, ಕ್ವಿಂಟಾಲ್‌ಗೆ 85 ಸಾವಿರ ರೂ. ಬಂಪರ್ ಬೆಲೆಯಲ್ಲಿ ಮಾರಾಟವಾಗುವ ಮೂಲಕ ಐತಿಹಾಸಿಕ ದರ ಲಭಿಸಿದೆ. ಒಂದು ತಿಂಗಳಿಂದ ಡಬ್ಬಿ ಕಾಯಿ 50ರಿಂದ 60 ಸಾವಿರ ದರದಲ್ಲಿ ಮಾರಾಟವಾಗುತ್ತಿತ್ತು. ಎರಡು ವರ್ಷದ ಹಿಂದೆ ಡಬ್ಬಿ ತಳಿಗೆ 75 ಸಾವಿರ ರೂಪಾಯಿಗೂ ಅಧಿಕ ಬೆಲೆ ಲಭಿಸಿ ದಾಖಲೆಯಾಗಿತ್ತು. ಕಡ್ಡಿ ತಳಿಯೂ ಕಳೆದ ವಾರ 50 ಸಾವಿರ ರೂಪಾಯಿಗೆ ಮಾರಾಟವಾಗಿದ್ದು, ಈ ವಾರ 60 ಸಾವಿರ ರೂಪಾಯಿಗೆ ತಲುಪಿದೆ.

Vijayavani Pg.11c